# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :1121
ಸದಸ್ಯರ ಹೆಸರು :ಶ್ರೀ ಬಸನಗೌಡ ಬಾದರ್ಲಿ
(ವಿಧಾನ ಸಭೆಯಿಂದ ಚುನಾಯಿತರಾದವರು).
ಉತ್ತರಿಸಬೇಕಾದ ದಿನಾಂಕ :16.12.2025.
ಉತ್ತರಿಸುವ ಸಚಿವರು :ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರೈತರು ಬೆಳೆಯುವ ಪ್ರಮುಖ ಕೃಷಿ ಉತ್ಪನ್ನಗಳಿಗೆ ಪ್ರಸ್ತುತ ಕೇಂದ್ರ / ರಾಜ್ಯ ಸರ್ಕಾರಗಳಿಂದ ನೀಡಲಾಗುತ್ತಿರುವ ಬೆಂಬಲ ಬೆಲೆಯ ವಿವರವನ್ನು ಉತ್ಪನ್ನ ವಾರು ನೀಡುವುದು ; | ಕೇಂದ್ರ ಸರ್ಕಾರದ ಕೃಷಿ ವೆಚ್ಚ ಮತ್ತು ಬೆಲೆ ಆಯೋಗವು (CACP) ಪ್ರತಿ ವರ್ಷ ಮುಂಗಾರು ಹಾಗೂ ಹಿಂಗಾರು ಹಂಗಾಮುಗಳ ಪೂರ್ವದಲ್ಲಿ ವಿವಿಧ ಉತ್ಪನ್ನಗಳ ಉತ್ಪಾದನಾ ವೆಚ್ಚವನ್ನು ಆಧರಿಸಿ ಬೆಂಬಲ ಬೆಲೆಯನ್ನು ನಿಗದಿಪಡಿಸಲು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡುತ್ತದೆ. ಸದರಿ ಶಿಫಾರಸ್ಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ಬೆಂಬಲ ಬೆಲೆಯನ್ನು ಘೋಷಿಸುತ್ತದೆ.<br>2025-26ನೇ ಸಾಲಿಗೆ ವಿವಿಧ ಕೃಷಿ ಮತ್ತು ತೋಟಗಾರಿಕಾ ಉತ್ಪನ್ನಗಳಿಗೆ ಬೆಂಬಲ ಬೆಲೆ ಘೋಷಿಸಿರುವ ಮಾಹಿತಿಯನ್ನು **ಅನುಬಂಧ** ದಲ್ಲಿ ಒದಗಿಸಿದೆ. |
| ಆ) | ಪ್ರಸಕ್ತ ವರ್ಷದಲ್ಲಿ ರೈತರು ಬೆಳೆಯುವ ಪ್ರಮುಖ ಕೃಷಿ ಉತ್ಪನ್ನಗಳಿಗೆ ಬೆಂಬಲ ಬೆಲೆ ಪರಿಷ್ಕರಣೆ ಕುರಿತು ಸರ್ಕಾರವು ಹೊಸ ಆದೇಶಗಳನ್ನು ಜಾರಿಗೆ ತರಲು ನಿರ್ಧರಿಸಿದೆಯೇ ; | |
| ಇ) | ರೈತರಿಗೆ ಘೋಷಿತ ಬೆಂಬಲ ಬೆಲೆ ವಾಸ್ತವಿಕವಾಗಿ ಸಿಗುವಂತೆ ಹೆಚ್ಚುವರಿ ಖರೀದಿ ಕೇಂದ್ರ ಗಳನ್ನು ಸ್ಥಾಪಿಸುವ ಬಗ್ಗೆ ಇಲಾಖೆ ಕೈಗೊಂಡಿರುವ ಕ್ರಮವೇನು ; | ಬೆಂಬಲ ಬೆಲೆ ಯೋಜನೆಯಡಿಯಲ್ಲಿ, ರೈತರು ಬೆಳೆಯುವ ಕೃಷಿ ಉತ್ಪನ್ನಗಳು ಮಾರುಕಟ್ಟೆಗೆ ಆವಕವಾಗುವ ಮೊದಲೇ ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯು ಸಭೆಯನ್ನು ನಡೆಸಿ, ಅವಶ್ಯಕತೆಗನುಗುಣವಾಗಿ ಸದೃಢ PACS/ OGCS/ TAPCMS/ FPO/ Agricultural Marketing & Processing Societies ಸಂಸ್ಥೆಗಳ ಮುಖಾಂತರ ಖರೀದಿ ಕೇಂದ್ರಗಳನ್ನು ತೆರೆಯಲು ಕ್ರಮಕೈಗೊಳ್ಳುತ್ತಿದೆ. |
| ಈ) | ಮಾರುಕಟ್ಟೆ ಕುಸಿತದಿಂದ ಉಂಟಾಗಿರುವ ನಷ್ಟವನ್ನು ತಗ್ಗಿಸಲು ರೈತರಿಗೆ ನೀಡುವ ಪ್ರೋತ್ಸಾಹಧನ ಅಥವಾ ಹೆಚ್ಚುವರಿ ನೆರವು ಕುರಿತು ಸರ್ಕಾರ ನಿರ್ಧಾರ ಕೈಗೊಂಡಿದೆಯೇ ; | ಕೇಂದ್ರ ಸರ್ಕಾರವು ಘೋಷಿಸುವ ಬೆಂಬಲ ಬೆಲೆಯ ಜೊತೆಗೆ ರಾಜ್ಯ ಸರ್ಕಾರವು ಕೆಲವು ಉತ್ಪನ್ನಗಳಿಗೆ ಉತ್ಪಾದನಾ ವೆಚ್ಚವನ್ನು ಆಧರಿಸಿ, ಕೃಷಿ ಮತ್ತು ತೋಟಗಾರಿಕಾ ಉತ್ಪನ್ನಗಳ ಬೆಲೆ ಸ್ಥಿರೀಕರಣ ಸಚಿವ ಸಂಪುಟ ಉಪಸಮಿತಿ ಸಭೆಯಲ್ಲಿ ಚರ್ಚಿಸಿ, ಪ್ರೋತ್ಸಾಹ ಧನವನ್ನು ನಿಗದಿಪಡಿಸಲಾಗುತ್ತದೆ. |
| ಉ) | ಬೆಂಬಲ ಬೆಲೆ ಜಾರಿಗೆ ಸಂಬಂಧಿಸಿದ ವಿಳಂಬ, ತಾಂತ್ರಿಕ ತೊಂದರೆಗಳು ಹಾಗೂ ದೂರು ಪರಿಹಾರಕ್ಕಾಗಿ ವಿಶೇಷ ಮಾನಿಟರಿಂಗ್ ವ್ಯವಸ್ಥೆ ಅಥವಾ ದೂರು ನಿರ್ವಹಣಾ ಕೇಂದ್ರ ಸ್ಥಾಪನೆ ಕುರಿತು ಸರ್ಕಾರದ ನಿಲುವು ಏನು ? | ರಾಜ್ಯದ ಮಾರುಕಟ್ಟೆಗಳಲ್ಲಿ ಉತ್ಪನ್ನಗಳ ಬೆಲೆ ಕುಸಿತಗೊಂಡ ಸಂದರ್ಭಗಳಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಕೃಷಿ ಉತ್ಪನ್ನಗಳನ್ನು ಖರೀದಿಸಲು ಕಾಲಕಾಲಕ್ಕೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಕೇಂದ್ರ ಸರ್ಕಾರದಿಂದ ಅನುಮೋದನೆ ದೊರೆತ ನಂತರ, ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಗಳ ಶಿಫಾರಸ್ಸಿನಂತೆ ಖರೀದಿ ಕೇಂದ್ರಗಳನ್ನು ತೆರೆದು ಖರೀದಿ ಪ್ರಕ್ರಿಯೆ ಜರುಗಿಸಲಾಗುತ್ತದೆ.<br>ಇದರಿಂದ, ಯಾವುದೇ ವಿಳಂಬಕ್ಕೆ ಆಸ್ಪದವಿರುವುದಿಲ್ಲ. |

**ಸಂಖ್ಯೆ: ಸಿಒ 329 ಎಂಆರ್‌ಇ 2025**

**(ಶಿವಾನಂದ ಎಸ್. ಪಾಟೀಲ)**
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು